ಕರ್ನಾಟಕ ಸರ್ಕಾರ

# ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ

## ಜಿಲ್ಲಾಪಂಚಾಯಿತಿ, ಹಾಸನ.

## 2011-12ನೇ ಸಾಲಿನ

## ಮಾಹಿತಿ ಹಕ್ಕು ಅಧಿನಿಯಮ 2005

## ಪ್ರಕರಣ 4(1) (ಬಿ)ಯ ಅಡಿಯಲ್ಲಿ ಪ್ರಕಟಿಸಲಾದ

## ಸ್ವ-ಇಚ್ಛೆ ಪ್ರಕಟಣೆಯ ವಿವರಗಳು

ಸಂ:ಹಿಸತೋನಿ/ಜಿಪಂಹಾ/ಸತೋಅ/ /2011-12 ದಿನಾಂಕ: 01-01-2011

# "ಸಾರ್ವಜನಿಕ ಮಾಹಿತಿಗೆ ಪ್ರಕಟಣೆ"

## 2011-12

## ಮಾಹಿತಿ ಹಕ್ಕು ಅಧಿನಿಯಮ, 2005 ಪ್ರಕರಣ 4 (1) (ಬಿ) ಅಡಿಯಲ್ಲಿ ಮಾಹಿತಿ ಪ್ರಕರಣೆ

**1) <u>ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ.) ಹಾಸನ ರವರ ಕಛೇರಿಯ ಕಾರ್ಯಗಳು ಮತ್ತು ಕರ್ತವ್ಯಗಳು</u>**

**<u>ಸಾಮಾನ್ಯ ಮಾಹಿತಿ</u>**

**1. ರಾಜಧಾನಿಯಿಂದ <u>ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು</u> (ಜಿ.ಪಂ.) ಹಾಸನ ಕಛೇರಿಗೆ ಇರುವ ದೂರ:200 ಕಿ.ಮೀ.**

ಕರ್ನಾಟಕ ರಾಜ್ಯದ ಆಗ್ನೇಯ ಭಾಗದಲ್ಲಿರುವ ಹಾಸನ ಜಿಲ್ಲೆಯಲ್ಲಿನ ತಾಲ್ಲೂಕು ಆದ ಒಟ್ಟು ಹಾಸನ ತಾಲ್ಲೂಕಿನ ಭೌಗೋಳಿಕ ವಿಸ್ತೀರ್ಣ 936 ಚದರ ಕಿ.ಮೀ.ಗಳಾಗಿದ್ದು ಒಟ್ಟು 5 ಹೋಬಳಿಗಳು (ಸಾಲಗಾಮೆ, ದುದ್ದ, ಶಾಂತಿಗ್ರಾಮ, ಕಸಬಾ, ಕಟ್ಟಾಯ).

ಹಾಸನ ತಾಲ್ಲೂಕಿನಲ್ಲಿ ಭಾರತೀಯ ಬಾಹ್ಯಕಾಶ ಸಂಸ್ಥೆಯ ಅಂಗ ಸಂಸ್ಥೆಯಾದ MCF ಕಾರ್ಯನಿರ್ವಹಿಸುತ್ತಿರುತ್ತದೆ. ಹೇಮಾವತಿ ಮತ್ತು ಯಗಚಿ ನದಿಗಳು ತಾಲ್ಲೂಕಿನ ರೈತರ ಜೀವನಾಡಿಯಾಗಿದೆ.

2008-09 ನೇ ಸಾಲಿನಲ್ಲಿ ತೋಟಗಾರಿಕೆ ಬೆಳೆಗಳ ಪ್ರದೇಶ 46942 ಹೆಕ್ಟೇರ್ ಇದ್ದು, ಸಾಗುವಳಿ ಪ್ರದೇಶದ 53667 ಹೆಕ್ಟೇರ್ ಹೊಂದಿರುತ್ತದೆ. ಪ್ರಮುಖ ಹಣ್ಣಿನ ಬೆಳೆಗಳಾದ ಮಾವು-737 ಹೆಕ್ಟೇರ್, ಬಾಳೆ-200 ಹೆಕ್ಟೇರ್, ನಿಂಬೆ-6 ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ. ತರಕಾರಿ ಬೆಳೆಗಳಾದ ಆಲೂಗೆಡ್ಡೆ-34119 ಹೆಕ್ಟೇರ್, ಟೊಮೆಟೊ-227 ಹೆಕ್ಟೇರ್, ಬದನೆ-1536 ಹೆಕ್ಟೇರ್, ಈರುಳ್ಳಿ -20 ಹೆಕ್ಟೇರ್, ಹಸಿಮೆಣಸಿನಕಾಯಿ-250 ಹೆಕ್ಟೇರ್, ಚಳಿಗಾಲದ ಬೆಳೆಗಳು (ಎಲೆಕೋಸು-490 ಹೆಕ್ಟೇರ್, ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ.) ಸಾಂಬಾರು ಬೆಳೆಗಳಾದ ಶುಂಠಿ-4700 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ತೋಟದ ಬೆಳೆಗಳಾದ ತೆಂಗು-4515 ಹೆಕ್ಟೇರ್, ಅಡಿಕೆ-495 ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ. ಹೂವಿನ ಬೆಳೆಗಳು 257 ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ.


HASSAN DISTRICT
TO KADUR
TO CHIKMAGALORE
TO TIPTUR
TO MUDIGERE
BELUR
HASSAN
ALUR
SAKLESHPUR
TO BANGALORE
TO MANGALORE
ARAKALGUD
TO SULIA
TO K.R.PETE
TO HUNSUR
PREPARED AT : NRDMS CENTRE/ZP/HASSAN.

## ಹೋಬಳಿವಾರು ಗ್ರಾಮ ಪಂಚಾಯಿತಿ ಮತ್ತು ಗ್ರಾಮಗಳ ಸಂಖ್ಯೆಯ ವಿವರ

| ಹೋಬಳಿ | ಗ್ರಾಮ ಪಂಚಾಯಿತಿ | ಗ್ರಾಮಗಳು |
|---|---|---|
| ಕಸಬಾ | 10 | 79 |
| ಕಟ್ಟಾಯ | 7 | 79 |
| ಶಾಂತಿಗ್ರಾಮ | 8 | 80 |
| ದುದ್ದ | 09 | 86 |
| ಸಾಲಗಾಮೆ | 06 | 82 |
| **ಒಟ್ಟು** | **40** | **406** |

**3. ತಾಲ್ಲೂಕುವಾರು ತೋಟಗಾರಿಕಾ ಬೆಳೆಗಳ ಮಾಹಿತಿ:**

# ಬೆಳೆವಾರು ಪ್ರದೇಶ ಮತ್ತು ಉತ್ಪನ್ನಗಳ ವಿವರ

## ಬೆಳೆವಾರು ಪ್ರದೇಶ (ಹೆಕ್ಟೇರ್ ಗಳಲ್ಲಿ) 2010–11

| ಕ್ರ,.ಸಂ. | ವಿವರ | 2010-11 |
|---|---|---|
| 1 | ಹಣ್ಣುಗಳು | 1221 |
| 2 | ತರಕಾರಿಗಳು | 35682 |
| 3 | ಸಾಂಬಾರು ಬೆಳೆಗಳು | 4767 |
| 3 | ತೋಟದ ಬೆಳೆಗಳು | 5015 |
| 4 | ಹೂವಿನ ಬೆಳೆಗಳು | 257 |
| ಒಟ್ಟು | | 46942 |

## ಬೆಳೆವಾರು ಉತ್ಪನ್ನ (ಟನ್ ಗಳಲ್ಲಿ) 2010–11

| ಕ್ರ,.ಸಂ. | ವಿವರ | 2010-11 |
|---|---|---|
| 1 | ಹಣ್ಣುಗಳು | 12575 |
| 2 | ತರಕಾರಿಗಳು | 192909 |
| 3 | ಸಾಂಬಾರು ಬೆಳೆಗಳು | 56797 |
| 3 | ತೋಟದ ಬೆಳೆಗಳು | 541505 |
| 4 | ಹೂವಿನ ಬೆಳೆಗಳು | 752060 |
| ಒಟ್ಟು | | 1555846 |

**4. ತಾಲ್ಲೂಕಿನಲ್ಲಿರುವ ತೋಟಗಾರಿಕಾ ಕ್ಷೇತ್ರ/ ಸಸ್ಯಾಗಾರಗಳ ಮಾಹಿತಿ:**

| ಕ್ರ.ಸಂ | ತೋಟಗಾರಿಕೆ ಕ್ಷೇತ್ರ/ ಸಸ್ಯಾಗಾರಗಳ ಹೆಸರು ಮತ್ತು ವಿಳಾಸ | ಒಟ್ಟು ವಿಸ್ತೀರ್ಣ (ಎಕರೆ.) | ಮೂಲಭೂತ ಸೌಖರ್ಯ ಮತ್ತು ಸಸ್ಯ ಸಂಪತ್ತಿನ ವಿವರ |
|---|---|---|---|
| 1. | ಸೋಮನಹಳ್ಳಿ ಕಾವಲು, ಹಾಸನ | ೩೫೨.೩೩ | ಕಛೇರಿ ಕಟ್ಟಡ, ನೆರಳು ಚಪ್ಪರ, ಕೊಳವೆಬಾವಿ-7, ನೀರಿನ ತೊಟ್ಟಿ-2, ಕಬ್ಬಿಣದ ಗೇಟ್, ತಂತಿಬೇಲಿ, ಸಪೋಟ-440 ಮರ, ಮಾವು-2945 ಮರ, ತೆಂಗು-995 |
| ೨. | ಎಸ್.ಜೆ.ಒ ನರ್ಸರಿ, ಹಾಸನ | ೫.೦೦ | ಕಛೇರಿ ಕಟ್ಟಡ, ಕೊಳವೆ ಬಾವಿ-1, ತಂತಿ ಬೇಲಿ, ತೆಂಗು-48, ಮಾವು-15, ಹಲಸು-21 |
| ೩. | ಶೀತಲ ಗೃಹ ನರ್ಸರಿ, ಹಾಸನ | ೨.೧೦ | ಕಚೇರಿ ಉಗ್ರಾಣ, ತೆರೆದ ಬಾವಿ-1, ತಂತಿಬೇಲಿ, ಮಾವು-102, ಸೀಬೆ-24, ತೆಂಗು-40 |

**5. ಹಿರಿಯ ಸಹಾಯಕ ತೋಟಗಾರಿಕೆ ನಿದೇಶಕರು ಜಿಲ್ಲಾ ಪಂಚಾಯತ, ಹಾಸನ ಜಿಲ್ಲೆ ಕಛೇರಿಯ ಕಾಯ9ಸಂಘಟನೆಯ ಪಟ್ಟಿ.**

**ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು**

|

|

**ಸಹಾಯಕ ತೋಟಗಾರಿಕೆ ನಿರ್ದೇಶಕರು**

|

|

---

**ಸಹಾಯಕ ತೋಟಗಾರಿಕೆ ಅಧಿಕಾರಿಗಳು**

**ತೋಟಗಾರಿಕೆ ಸಹಾಯಕರು**

**ಪ್ರಥಮ ದರ್ಜೆ ಸಹಾಯಕರು**

6. ಹಾಸನ ತಾಲ್ಲೂಕಿನಲ್ಲಿ ಒಟ್ಟೂ 5 ಹೋಬಳಿಗಳಿದ್ದು, ಅವುಗಳಲ್ಲಿ ಸಾಲಗಾಮೆ, ದುದ್ದ, ಶಾಂತಿಗ್ರಾಮ, ಕಸಬಾ, ಕಟ್ಟಾಯ, ಹಾಗೂ ಕಛೇರಿಯಲ್ಲಿ ಒಬ್ಬರು ಸಹಾಯಕ ತೋಟಗಾರಿಕೆ ಅಧಿಕಾರಿಗಳು ಕೆಲಸ ನಿರ್ವಹಿಸುತ್ತಿರುತ್ತಾರೆ.

ಹಿರಿಯ ಸಹಾಯಕ ತೋಟಗಾರಿಕೆ ನಿರ್ಧೇಶಕರು ಈ ಕಛೇರಿಯ ಮುಖ್ಯಸ್ಥರಾಗಿರುತ್ತಾರೆ. ಒಬ್ಬ ಸಹಾಯಕ ತೋಟಗಾರಿಕೆ ನಿರ್ಧೇಶಕರು, 6 ಸಹಾಯಕ ತೋಟಗಾರಿಕೆ ಅಧಿಕಾರಿಗಳು, 2 ತೋಟಗಾರಿಕೆ ಸಹಾಯಕರು ಒಬ್ಬರು ಪ್ರಥಮ ದರ್ಜೆ ಸಹಾಯಕರ ಹುದ್ದೆ ಇರುತ್ತದೆ.

## 7.ಹಿರಿಯ ಸಹಾಯಕ ತೋಟಗಾರಿಕೆ ನಿರ್ಧೇಶಕರ ಕಛೇರಿಯ ಕಾರ್ಯಗಳು ಮತ್ತು ಕರ್ತವ್ಯಗಳು ಈ ಕೆಳಕಂಡಂತೆ ಇರುತ್ತವೆ.

**ಸಾಮಾನ್ಯ ಕಾರ್ಯಗಳು:**

- ತಾಲ್ಲೂಕು ಇಲಾಖೆಯ ಕೇಂದ್ರ ಕಛೇರಿಯಾಗಿದ್ದು ತೋಟಗಾರಿಕೆ ಇಲಾಖೆಗೆ ಸಂಬಂಧಿಸಿದ ಆಡಳಿತ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಅನುಷ್ಟಾನಗೊಳಿಸುವುದು.
- ತಾಲ್ಲೂಕಿನ ತೋಟಗಾರಿಕೆ ಬೆಳೆಗಾರರ ಅವಶ್ಯಕತೆಗಳಿಗೆ ತಕ್ಕಂತೆ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
- ತೋಟಗಾರಿಕೆ ಇಲಾಖೆಯಿಂದ ಅನುಷ್ಟಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳನ್ನು ಹೋಬಳಿವಾರು ಹಂಚಿಕೆ ಮಾಡಿ ಸಮರ್ಪಕವಾಗಿ ಅನುಷ್ಟಾನಗೊಳಿಸುವುದು.

- ❖ ತೋಟಗಾರಿಕೆ ಕ್ಷೇತ್ರ ಮತ್ತು ನರ್ಸರಿಗಳ ಸರ್ವತೋಮುಖ ಅಭಿವೃದ್ಧಿ ಪಡಿಸಲು ಅವಶ್ಯವಿರುವ ಮಾರ್ಗದರ್ಶನ ನೀಡುವುದು.
- ❖ ಯೋಜನೆ /ಯೋಜನೇತರ ಬಿಲ್ಲುಗಳನ್ನು ಎಂ.ಎಂ.ಆರ್. ಪ್ರಕಾರ ಸಿದ್ದಪಡಿಸುವುದು ಹಾಗೂ ಅದರಂತೆ ಕಾರ್ಯೋನ್ಮೋಖರಾಗುವುದು..
- ❖ ತಾಲ್ಲೂಕು ಮಟ್ಟದಲ್ಲಿ ವಿವಿಧ ಯೋಜನೆಗಳ ಅನುಷ್ಟಾನ ಮತ್ತು ಪ್ರಗತಿಯ ಪರಿಶೀಲನೆ ಮಾಡಿ ತಾಲ್ಲೂಕಿನ ಪ್ರಗತಿ ವರದಿಯನ್ನು ತಯಾರಿಸಿ ಜಿಲ್ಲಾ ಮಟ್ಟಕ್ಕೆ ಸಲ್ಲಿಸುವುದು.
- ❖ ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಗಳಿಗೆ ಇಲಾಖೆಯ ಪ್ರತಿನಿಧಿಯಾಗಿ ಭಾಗವಹಿಸುವುದು.
- ❖ ಪ್ರಕೃತಿ ವಿಕೋಪ ಸಂಭವಿಸಿದ ಸಮಯದಲ್ಲಿ ಆಗಿರುವ ಹಾನಿಯ ಅಂದಾಜನ್ನು ಪರಿಶೀಲಿಸಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ಸಹಾಯಧನಕ್ಕೆ ಕಂದಾಯ ಇಲಾಖೆಗೆ ಶಿಫಾರಸ್ಸು ಮಾಡುವುದು.
- ❖ ರೈತರ ತಾಕುಗಳಿಗೆ ಭೇಟಿ ನೀಡಿ ವಿವಿಧ ಸಲಹೆ ಸೂಚನೆಗಳನ್ನುನೀಡುವುದು.

**ವಿಸ್ತರಣೆ ಮತ್ತು ತರಬೇತಿ:**

1. ತೋಟಗಾರಿಕೆ ಇಲಾಖೆಯಿಂದ ಅನುಷ್ಟಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಕುರಿತು ರೈತರಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡುವುದು.
2. ತೋಟಗಾರಿಕೆ ಬೆಳೆಗಳ ಬೇಸಾಯ, ನಿರ್ವಹಣೆ, ಕೊಯ್ಲು, ಸಂಸ್ಕರಣೆ ಕುರಿತು ರೈತರಿಗೆ ತರಬೇತಿ ನೀಡುವುದು.
3. ತೋಟಗಾರಿಕೆಯಲ್ಲಿ ಸಾವಯವ ಕೃಷಿ, ಜೇನು ಕೃಷಿ ಮುಂತಾದ ಅವಶ್ಯಕ ಹೊಸ ತಂತ್ರಜ್ಞಾನಗಳನ್ನು ರೈತರಿಗೆ ತರಬೇತಿ, ವಿಚಾರ ಸಂಕಿರಣ, ಕಾರ್ಯಾಗಾರ ಮುಂತಾದವುಗಳನ್ನು ಏರ್ಪಡಿಸುವ ಮೂಲಕ ಮಾಹಿತಿ ಒದಗಿಸುವುದು.
4. ತೋಟಗಾರಿಕೆಯಲ್ಲಿ ಅನುಷ್ಟಾನಗೊಳಿಸಲಾಗುತ್ತಿರುವ ಹೊಸ ಹೊಸ ಯೋಜನೆಗಳ ಮಾಹಿತಿಯನ್ನು ಪತ್ರಿಕೆ, ಆಕಾಶವಾಣಿ, ದೂರದರ್ಶನ ಮುಂತಾದ ಸಮೂಹ ಮಾಧ್ಯಮಗಳ ಮೂಲಕ ರೈತರಿಗೆ ತಲುಪುವಂತೆ ಮಾಡುವುದು.
5. ಕೃಷಿ ವಿಜ್ಞಾನ ಕೇಂದ್ರ, ಕೃಷಿ ವಿಶ್ವವಿದ್ಯಾಲಯ ಮುಂತಾದ ಕೃಷಿ ಆಧಾರಿತ ಸಂಶೋಧನಾ ಕೇಂದ್ರಗಳಿಂದ ವಿವಿಧ ಹೊಸ ತಂತ್ರಜ್ಞಾನಗಳನ್ನು ರೈತರ ತೋಟಗಳಿಗೆ ತಲುಪಿಸುವಂತೆ ಮಾಡುವುದು.
6. ರೈತರ ಮಕ್ಕಳಿಗೆ, ರೈತರಿಗೆ, ರೈತ ಮಹಿಳೆಯರಿಗೆ ತರಬೇತಿ ನೀಡುವುದು.
7. ರೈತರನ್ನು ರಾಜ್ಯ ಮತ್ತು ಹೊರ ರಾಜ್ಯಗಳ ಉತ್ತಮ ತೋಟ, ಸಂಶೋದನಾ ಕೇಂದ್ರಗಳಿಗೆ ಪ್ರವಾಸ ಕೈಗೊಂಡು ರೈತರ ಜ್ಞಾನ ವರ್ಧನೆಗೆ ಸಹಕರಿಸುವುದು.

**ಸಸ್ಯಾಭಿವೃದ್ಧಿ:**

1. ಉತ್ತಮ ಗುಣಮಟ್ಟದ ಜಿಲ್ಲೆಯ ವಾತಾವರಣಕ್ಕೆ ಹೊಂದುವ ತಳಿಗಳನ್ನು ಗುರುತಿಸಿ ಅಭಿವೃದ್ಧಿಗೊಳಿಸುವುದು.
2. ಇಲಾಖೆಯ ತೋಟಗಾರಿಕೆ ಕ್ಷೇತ್ರಗಳಿಂದ, ಸಾರ್ವಜನಿಕ ವಲಯದ ನರ್ಸರಿಗಳಿಂದ, ಖಾಸಗಿ ವಲಯದ ನರ್ಸರಿಗಳಿಂದ ಉತ್ತಮ ಗುಣಮಟ್ಟದ ಕಸಿ/ಸಸಿಗಳನ್ನು ಉತ್ಪಾದಿಸಲು ಕ್ರಮ ಕೈಗೊಳ್ಳುವುದು.
3. ಉತ್ತಮ ಗುಣಮಟ್ಟದ ಕಸಿ/ಸಸಿಗಳು ಅವಶ್ಯಕ ಪ್ರಮಾಣದಲ್ಲಿ ಸಾರ್ವಜನಿಕ ವಲಯದಲ್ಲಿ ಲಭ್ಯವಿಲ್ಲದಿದ್ದ ಸಮಯದಲ್ಲಿ ಖಾಸಗಿ ವಲಯದ ನರ್ಸರಿಗಳಿಂದ ಕರ್ನಾಟಕ ಪಾರದರ್ಶಕ ನಿಯಮಾವಳಿಗಳ ಮೂಲಕ ಪಡೆದು ರೈತರಿಗೆ ಒದಗಿಸುವ ವ್ಯವಸ್ಥೆ ಮಾಡುವುದು.
4. ಜಿಲ್ಲೆಯ ವಿಶೇಷ ತೋಟಗಾರಿಕೆ ಬೆಳೆಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಕ್ರಮ ಕೈಗೊಳ್ಳುವುದು.

**ಪ್ರದೇಶ ವಿಸ್ತರಣೆ**

1. ತಾಲ್ಲೂಕಿನ ವಾತಾವರಣಕ್ಕೆ ಸೂಕ್ತವಾದ ತಳಿಗಳನ್ನು ಆಯ್ಕೆ ಮಾಡಿ ಅವುಗಳ ಪ್ರದೇಶ ವಿಸ್ತರಣೆ ಕೈಗೊಳ್ಳುವುದು.
2. ಆಯಾ ಪ್ರದೇಶಗಳಿಗೆ ಸೂಕ್ತವಾದ ಬೆಳೆಗಳನ್ನು ಮತ್ತು ತಳಿಗಳನ್ನು ಆಯ್ಕೆ ಮಾಡಿ ಯೋಗ್ಯ ಫಲಾನುಭವಿಗಳಿಂದ ಪ್ರದೇಶ ವಿಸ್ತರಣೆ ಕೈಗೊಳ್ಳುವುದು.
3. ಹಣ್ಣು, ತರಕಾರಿ, ಹೂವಿನ ಬೆಳೆಗಳು, ತೋಟದ ಬೆಳೆಗಳು, ಸಂಬಾರು ಬೆಳೆಗಳು, ಔಷಧಿ ಬೆಳೆಗಳು, ಸುಗಂಧದ್ರವ್ಯ ಬೆಳೆಗಳ ಪ್ರದೇಶ ವಿಸ್ತರಣೆಗೆ ಯೋಗ್ಯವಾದ ಪರಿಸರವನ್ನು ಆಯ್ಕೆ ಮಾಡಿ ಅಲ್ಲಿನ ರೈತರಿಗೆ ಸದರಿ ಬೆಳೆಗಳ ಪ್ರದೇಶ ವಿಸ್ತರಣೆಗೆ ಪ್ರೋತ್ಸಾಹಿಸುವುದು.
4. ಹೊಸ ಬೆಳೆಗಳು, ತಳಿಗಳನ್ನು ಪರಿಚಯಿಸುವುದು.
5. ವಿನಾಶದ ಅಂಚಿನಲ್ಲಿರುವ ತೋಟಗಾರಿಕೆ ಬೆಳೆಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಪಡಿಸುವುದು.

**ನೀರಿನ ಮೂಲಗಳ ನಿರ್ಮಾಣ**

1. ತೋಟಗಾರಿಕೆ ಬೆಳೆಗಳಿಗೆ ಅವಶ್ಯಕತೆಯಿರುವ ಪ್ರಮಾಣದಲ್ಲಿ ನೀರಾವರಿ ಸೌಲಭ್ಯ ಒದಗಿಸಲು ಬೇಕಾದ ಸಮುದಾಯ ಕೆರೆಗಳನ್ನು ನಿರ್ಮಿಸಲು ರೈತರನ್ನು ಪ್ರೋತ್ಸಾಹಿಸುವುದು.
2. ವೈಜ್ಞಾನಿಕ ಪದ್ಧತಿಯಲ್ಲಿ ಬೆಳೆಗಳಿಗೆ ಸಾಕಾಗುವ ಪ್ರಮಾಣದ ನೀರನ್ನು ಸಂಗ್ರಹಿಸಿಟ್ಟುಕೊಳ್ಳಲು ಅವಶ್ಯಕತೆಗೆ ತಕ್ಕಂತೆ ಸಮುದಾಯ ಕೆರೆಗಳನ್ನು ನಿರ್ಮಿಸಲು ಸಹಾಯಧನ ಒದಗಿಸುವುದು.

**ರಕ್ಷಿತ ಬೇಸಾಯ**

1. ತೋಟಗಾರಿಕೆ ಬೆಳೆಗಳಿಗೆ ಅವಶ್ಯಕವಿರುವ ಹಸಿರುಮನೆಗಳ ನಿರ್ಮಾಣಕ್ಕೆ ರೈತರನ್ನು ಪ್ರೋತ್ಸಾಹಿಸುವುದು.
2. ಶೇಡ್ ನೆಟ್ ನಿರ್ಮಾಣಕ್ಕೆ ಪ್ರೋತ್ಸಾಹಿಸುವುದು.
3. ಹೊಸ ಹೊಸ ಬೆಳೆಗಳನ್ನು ಸಂರಕ್ಷಿತ ಬೇಸಾಯದಲ್ಲಿ ಬೆಳೆಯಲು ಪ್ರೋತ್ಸಾಹಿಸುವುದು.

**ಸಮಗ್ರ ಪೋಷಕಾಂಶ ಹಾಗೂ ಸಮಗ್ರ ಪೀಡೆ ನಿರ್ವಹಣೆ**

1. ತೋಟಗಾರಿಕೆ ಬೆಳೆಗಳಿಗೆ ಅವಶ್ಯವಿರುವ ಪೋಷಕಾಂಶಗಳ ನಿರ್ವಹಣೆ ಮಾಡಲು ಬೇಕಾದ ಜೈವಿಕ ಗೊಬ್ಬರಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಒದಗಿಸುವ ವ್ಯವಸ್ಥೆ ಮಾಡುವುದು.
2. ಮಣ್ಣಿನ ರಸಸಾರ ನಿರ್ವಹಣೆಗೆ ಅವಶ್ಯವಾದ ಸುಣ್ಣ / ಜಿಪ್ಸಂ ಬಳಸಲು ಪ್ರೋತ್ಸಾಹಿಸುವುದು.
3. ಹಸಿರೆಲೆ ಗೊಬ್ಬರಗಳ ಮಹತ್ವವನ್ನು ರೈತರಿಗೆ ಮನದಟ್ಟು ಮಾಡಿ ಬಳಕೆಯನ್ನು ಪ್ರೋತ್ಸಾಹಿಸುವುದು.
4. ಜೈವಿಕ ಪದ್ಧತಿಯಲ್ಲಿ ರೋಗ ಮತ್ತು ಕೀಟಗಳ ನಿಯಂತ್ರಣ ಪದ್ಧತಿಗೆ ಪ್ರೋತ್ಸಾಹಿಸುವುದು.
5. ಬೋರ್ಡೋ ಮಿಶ್ರಣ, ಜೈವಿಕ ಕೀಟನಾಶಕಗಳು, ಸಮ್ಮೋಹಕ ಬಲೆಗಳ ಬಳಕೆಗೆ ಸಹಾಯಧನ ಒದಗಿಸುವುದು.
6. ಸಾರ್ವಜನಿಕ ವಲಯದಲ್ಲಿ ರೋಗ ಮುನ್ಸೂಚನಾ ಘಟಕಗಳನ್ನು ಸ್ಥಾಪಿಸಿ ಮುಂದೆ ಬರಬಹುದಾದ ರೋಗಗಳ ಯಾ ಕೀಟಗಳ ಹತೋಟಿಗೆ ಅವಶ್ಯಕ ಮಾಹಿತಿಯನ್ನು ರೈತರಿಗೆ ಒದಗಿಸುವುದು.
7. ಸಸ್ಯ ಆರೋಗ್ಯ ಚಿಕಿತ್ಸಾಲಯವನ್ನು ಸ್ಥಾಪಿಸಿ ರೈತರಿಗೆ ಅವಶ್ಯಕ ಮಾಹಿತಿಯನ್ನು ಒದಗಿಸುವುದು.

**ಜೇನು ಕೃಷಿ**

1. ರೈತರ ತೋಟಗಳಲ್ಲಿ ಜೇನು ಸಾಕಣೆಗೆ ಪ್ರೋತ್ಸಾಹಿಸುವುದು.
2. ಜೇನು ಸಾಕಣಿಕೆ ಸೊಸೈಟಿಗಳ ಮೂಲಕ ರೈತರಿಗೆ ತರಬೇತಿ ಏರ್ಪಡಿಸುವುದು.
3. ರೈತರ ತೋಟಗಳ ಬೆಳೆಗಳಲ್ಲಿನ ಪರಾಗಸ್ಪರ್ಶ ಹೆಚ್ಚಳದಲ್ಲಿ ಜೇನು ಹುಳಗಳ ಪಾತ್ರದ ಬಗ್ಗೆ ರೈತರಿಗೆ ಅರಿವು ಮೂಡಿಸುವುದು.

**ಕೊಯ್ಲೋತ್ತರ ನಿರ್ವಹಣೆ**

1. ತೋಟಗಾರಿಕೆ ಬೆಳೆಗಳಾದ ಹಣ್ಣು, ತರಕಾರಿ, ತೋಟದ ಬೆಳೆಗಳು, ಔಷಧಿ ಸಸ್ಯಗಳು ಮತ್ತು ಸುಗಂಧ ದ್ರವ್ಯ ಬೆಳೆಗಳ ಕೊಯ್ಲೋತ್ತರ ನಿರ್ವಹಣೆಗೆ ಪ್ರೋತ್ಸಾಹಿಸುವುದು.
2. ತೋಟಗಾರಿಕೆ ಬೆಳೆಗಳ ಅವಶ್ಯಕತೆಗೆ ತಕ್ಕಂತೆ ಪ್ಯಾಕ್ ಹೌಸ್‌ಗಳ ನಿರ್ಮಾಣಕ್ಕೆ ಪ್ರೋತ್ಸಾಹಿಸುವುದು.
3. ಶೀತಲ ಗೃಹ ನಿರ್ಮಾಣಕ್ಕೆ ಪ್ರೋತ್ಸಾಹಿಸುವುದು.
4. ತೋಟಗಾರಿಕೆ ಬೆಳೆಗಳ ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಾಣಕ್ಕೆ ಪ್ರೋತ್ಸಾಹ ನೀಡುವುದು.

**ತೋಟಗಾರಿಕೆ ಬೆಳೆಗಳಿಗೆ ಮಾರುಕಟ್ಟೆ ಅಭಿವೃದ್ಧಿ**

1. ಮಾರುಕಟ್ಟೆಯಲ್ಲಿ ನಿರತರಾದ ಸಂಸ್ಥೆಗಳಾದ ಹಾಪ್‌ಕಾಮ್ಸ್, ಜಿಲ್ಲಾ ತೋಟಗಾರಿಕೆ ಬೆಳೆಗಾರರ ಸಂಘಗಳು, ಎಪಿಎಂಸಿ ಹಾಗೂ ಸರ್ಕಾರೇತರ ಸಂಘ ಸಂಸ್ಥೆಗಳಿಗೆ ಸಗಟು ಮಾರುಕಟ್ಟೆ ಅಭಿವೃದ್ಧಿಗೆ ಸಹಾಯಧನ ಒದಗಿಸುವುದು.
2. ಗ್ರಾಮೀಣ ಮಾರುಕಟ್ಟೆ, ರೈತ ಸಂತೆ, ನೇರ ಮಾರುಕಟ್ಟೆ ನಿರ್ಮಾಣಕ್ಕೆ ಪ್ರೋತ್ಸಾಹಿಸುವುದು.

**ಇತರೆ ಕಾರ್ಯಗಳು:**

1. ಜಿಲ್ಲೆಯ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮಾನ್ಯ ತೋಟಗಾರಿಕೆ ಉಪನಿರ್ದೇಶಕರು, ಮತ್ತಿತರ ಮೇಲಾಧಿಕಾರಿಗಳು ಸೂಚಿಸುವ ವಿಶೇಷ ಕೆಲಸಗಳನ್ನು ನಿರ್ವಹಿಸುವುದು.
2. ಜನಸ್ಪಂದನಾ ಸಭೆ , ಸಾಮಾನ್ಯಸಭೆ ಮುಂತಾದ ಸಭೆಗಳಿಗೆ ಹಾಜರಾಗುವುದು.
3. ಪ್ರಕೃತಿ ವಿಕೋಪ ಮುಂತಾದ ಸಮಯಗಳಲ್ಲಿ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಕೆಲಸ ನಿರ್ವಹಿಸುವುದು.
4. ಇನ್ನಿತರೆ ಕಾಲಕಾಲಕ್ಕೆ ಸೂಚಿಸಲಾಗುವ ವಿಶೇಷ ಕಾರ್ಯ ನಿರ್ವಹಿಸುವುದು.

## 4 (B) (II) ಅಧಿಕಾರಿ/ನೌಕರರುಗಳ ಅಧಿಕಾರ ಮತ್ತು ಕರ್ತವ್ಯಗಳು
## (POWERS AND DUTIES OF OFFICERS AND EMPLOYEES)

| | |
|---|---|
| **ತೋಟಗಾರಿಕೆ ಸಹಾಯಕರು** | ತೋಟಗಾರಿಕೆ ಸಹಾಯಕರು ಸಸ್ಯಕ್ಷೇತ್ರಗಳ ಹಾಗೂ ಅಭಿವೃದ್ಧಿ (ಡೆವಲಪ್‌ಮೆಂಟ್ ವರ್ಕ್) ಕೆಲಸಗಳ ಮೇಲ್ವಿಚಾರಕರಾಗಿರುತ್ತಾರೆ. ಸಸ್ಯಕ್ಷೇತ್ರಗಳಲ್ಲಾದರೆ, ಕ್ಷೇತ್ರದ ಸಾಗುವಳಿ, ಸಸ್ಯ ಸಂರಕ್ಷಣೆ, ಸಸ್ಯೋತ್ಪಾದನೆಯ ನಿಗಧಿತ ಗುರಿ ಸಾಧಿಸುವುದು ಮತ್ತು ಕ್ಷೇತ್ರಗಳ ಸಂರಕ್ಷಣೆ ಇವರ ಜವಾಬ್ದಾರಿಯಾಗಿರುತ್ತದೆ. ಸಸ್ಯಕ್ಷೇತ್ರಗಳನ್ನು ಸ್ವಚ್ಛವಾಗಿಟ್ಟುಕೊಂಡು ಜನ ಜಾನುವಾರುಗಳು, ಬೆಂಕಿಗಳಿಂದ ಸಂರಕ್ಷಿಸುವುದು ಇವರ ಕರ್ತವ್ಯವಾಗಿರುತ್ತದೆ. ಸಸ್ಯಕ್ಷೇತ್ರದಲ್ಲಿನ ಅಭಿವೃದ್ಧಿ ಕೆಲಸಗಳಿಗೆ ಅವಶ್ಯಕವಾಗಿರುವ ದಾಸ್ತಾನು ಸಾಮಾಗ್ರಿಗಳಿಗೆ ಬಿಲ್ಲುಗಳನ್ನು ತರುವುದು. ಕ್ಷೇತ್ರಕ್ಕೆ ನೀರಿನ ಸಕಾಲಕ್ಕೆ ನಿರ್ವಹಣೆ, ಲೇಬರ್ ಪೋರ್‌ಕಾಸ್ಟ್ ಹಾಗೂ ಕ್ಷೇತ್ರದ ಆದಾಯವನ್ನು ಸರ್ಕಾರಕ್ಕೆ ಜಮಾ ಮಾಡಲು ಕ್ರಮ ಕೈಗೊಳ್ಳುವುದು ಇವರ ಕರ್ತವ್ಯವಾಗಿರುತ್ತದೆ. ತೋಟಗಾರಿಕೆ ಸಹಾಯಕರು (ಅಭಿವೃದ್ಧಿ) ರೈತ ಫಲಾನುಭವಿಗಳ ತಾಕುಗಳ ಪರಿಶೀಲನೆ, ಸರ್ಕಾರದ ನೀತಿ ನಿಯಮಗಳನ್ವಯ ಫಲಾನುಭವಿಗಳ ಆಯ್ಕೆ, ಸವಲತ್ತುಗಳ ವಿತರಣೆ, ಕ್ಷೇತ್ರೋತ್ಸವದ ಜವಾಬ್ದಾರಿ, ಕ್ರಿಮಿನಾಶಕ ವಿತರಣೆ, ತಾಂತ್ರಿಕ ಸಲಹೆಗಳನ್ನು ನೀಡುವುದು ಇವರ ಜವಾಬ್ದಾರಿಯಾಗಿರುತ್ತದೆ. |
| **ಪ್ರಥಮ ದರ್ಜೆ ಸಹಾಯಕರು** | ಹಂಚಿಕೆಯಾದ ವಿಷಯವನ್ನು ಸಮರ್ಪಕವಾಗಿ ನಿಯಮಗಳನ್ವಯ ಪರಿಶೀಲಿಸಿ, ಕಡತವನ್ನು ರಚಿಸಿ, ಕಛೇರಿ ಕೈಪಿಡಿಯಲ್ಲಿನ ನಿಯಮಗಳನ್ವಯ ಮುಂದಿನ ಆದೇಶ ಕೋರಿ ಕಡತ ಮಂಡಿಸುವುದು.ಸಾದಿಲ್ವಾರ್ ಬಿಲ್ಲುಗಳನ್ನು ಸಿದ್ದಪಡಿಸುವುದು.ನಗದು ಪುಸ್ತಕ ನಿರ್ವಹಣೆ,ನೊಂದಣಿ,ರವಾನೆ,ಸ್ಟಾಂಪ್‌ವಹಿ ನಿರ್ವಹಣೆ,ವೇತನ ಬಿಲ್ಲು ತಯಾರಿಸಿ ಸಿದ್ದಪಡಿಸುವುದು ಹಾಗೂ ಆಡಳಿತಾತ್ಮಕ ಕೆಲಸಕ್ಕೆ ಸಂಬಂಧಿಸಿದ ಕೆಲಸ ನಿರ್ವಹಿಸುವುದು. |
| **ಸಹಾಯಕ ತೋಟಗಾರಿಕೆ ಅಧಿಕಾರಿ** | ತಾಲ್ಲೂಕಿನ ಘಟಕಾಧಿಕಾರಿಯಾಗಿ ಇಲಾಖೆಯ ಪ್ರಧಾನ ಕಾರ್ಯ ನಿರ್ವಾಹಕ ಅಧಿಕಾರಿಯಾಗಿದ್ದು, ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸಬೇಕಾಗಿದೆ. |
| **ಸಹಾಯಕ ತೋಟಗಾರಿಕೆ ನಿರ್ದೇಶಕರು** | ತಾಲ್ಲೂಕಿನ ಬಟವಾಡೆ ಅಧಿಕಾರಿಯವರಿಗೆ ಪ್ರಗತಿ ಸಾಧಿಸಲು ಸಹಾಯಕ ಅಧಿಕಾರಿಯಾಗಿ ಕೆಲಸ ನಿರ್ವಹಿಸುವುದು. |

## 4 (B) III ನಿರ್ಣಯ ತೆಗೆದುಕೊಳ್ಳುವಂತಹ ಪ್ರಸ್ತಾವನೆಗಳಲ್ಲಿ ಪಾಲಿಸಬೇಕಾದ ಕ್ರಮ ಮೇಲ್ವಿಚಾರಣೆ ಚಾನಲ್‌ಗಳು ಮತ್ತು ಅಕೌಂಟಬಿಲಿಟಿ ದಂತೆ

## (THE PROCEDURE FOLLOWED IN THE DECISION MAKING PROCESS INCLUDING CHANNELS OF SUPERVISION ACCOUNTABILITY

| | |
|---|---|
| **ತೋಟಗಾರಿಕೆ ಸಹಾಯಕರು** | ಉನ್ನತ ಅಧಿಕಾರಿಗಳು ವಹಿಸಿಕೊಡಲಾದ ಕ್ಷೇತ್ರ ನಿರ್ವಹಣೆ ಅಥವಾ ಅಭಿವೃದ್ಧಿಗೆ ಸಂಬಂಧಪಟ್ಟ ಕೆಲಸಗಳನ್ನು ನಿರ್ವಹಿಸಲು ಜವಾಬ್ದಾರರಾಗಿರುತ್ತಾರೆ. ಯಾವುದೇ ನಿರ್ಣಾಯಕ್ಕೆ ಅವಕಾಶವಿರುವುದಿಲ್ಲ. |
| **ವಿಷಯ ನಿರ್ವಾಹಕರು ಪ್ರಥಮದರ್ಜೆಸಹಾಯಕರು** | ಹಂಚಿಕೆಯಾದ ವಿಷಯವನ್ನು ಸಮರ್ಪಕವಾಗಿ ನಿಯಮಗಳನ್ವಯ ಪರಿಶೀಲಿಸಿ, ಕಡತವನ್ನು ರಚಿಸಿ, ಕಛೇರಿ ಕೈಪಿಡಿಯಲ್ಲಿನ ನಿಯಮಗಳನ್ವಯ ಮುಂದಿನ ಆದೇಶ ಕೋರಿ ಕಡತ ಮಂಡಿಸುವುದು.ಸಾದಿಲ್ವಾರ್ ಬಿಲ್ಲುಗಳನ್ನು ಸಿದ್ದಪಡಿಸುವುದು.ನಗದು ಪುಸ್ತಕ ನಿರ್ವಹಣೆ,ನೊಂದಣಿ,ರವಾನೆ,ಸ್ಟಾಂಪ್‌ವಹಿ ನಿರ್ವಹಣೆ,ವೇತನ ಬಿಲ್ಲು ತಯಾರಿಸಿ ಸಿದ್ದಪಡಿಸುವುದು ಹಾಗೂ ಆಡಳಿತತ್ಮಾಕ ಕೆಲಸಕ್ಕೆ ಸಂಬಂಧಿಸಿದ ಕೆಲಸ ನಿರ್ವಹಿಸುವುದು. |
| **ಸಹಾಯಕ ತೋಟಗಾರಿಕೆ ಅಧಿಕಾರಿ** | ಪ್ರಸ್ತಾವನೆಗಳನ್ನು ನಿಯಂತ್ರಣಾಧಿಕಾರಿಗಳಿಗೆ ಸಲ್ಲಿಸಲು ಅವಕಾಶವಿದ್ದು ಸಲ್ಲಿಸಬಹುದಾಗಿರುತ್ತದೆ |
| **ಸಹಾಯಕ ತೋಟಗಾರಿಕೆ ನಿರ್ದೇಶಕರು** | ತಾಲ್ಲೂಕಿನ ಬಟವಾಡೆ ಅಧಿಕಾರಿಯವರಿಗೆ ಪ್ರಗತಿ ಸಾಧಿಸಲು ಸಹಾಯಕ ಅಧಿಕಾರಿಯಾಗಿ ಕೆಲಸ ನಿರ್ವಹಿಸುವುದು. |

4 (B) IV ಕೆಲಸ ಕಾರ್ಯಗಳನ್ನು ನಿರ್ವಹಿಸಲು ನಿಗಧಿಪಡಿಸಲಾದ ವಿಧಾನಗಳು ಕಟ್ಟುಪಾಡುಗಳು (Norms)
(THE NORMS SET BY IT FOR THE DISCHARGE OF ITS FUNCTIONS)

| | |
|---|---|
| **ತೋಟಗಾರಿಕೆ ಸಹಾಯಕರು** | ವಹಿಸಲಾದ ಎಲ್ಲಾ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವುದರ ಜೊತೆಗೆ ಸಸ್ಯಕ್ಷೇತ್ರ/ಅಭಿವೃದ್ಧಿಯ ದಾಸ್ತಾನು ನಿರ್ವಹಣಾ ಲೆಕ್ಕವನ್ನು ಕ್ರಮಬದ್ಧವಾಗಿಟ್ಟುಕೊಂಡು ನಿಗಧಿತ ಗುರಿಗೆ ಅವಕಾಶ ಮಾಡಿಕೊಡುವುದು. |
| **ವಿಷಯ ನಿರ್ವಾಹಕರು/ ಪ್ರಥಮದರ್ಜೆ ಸಹಾಯಕರು** | ಹಂಚಿಕೆಯಾದ ವಿಷಯವನ್ನು ಸಮರ್ಪಕವಾಗಿ ನಿಯಮಗಳನ್ವಯ ಪರಿಶೀಲಿಸಿ, ಕಡತವನ್ನು ರಚಿಸಿ, ಕಛೇರಿ ಕೈಪಿಡಿಯಲ್ಲಿನ ನಿಯಮಗಳನ್ವಯ ಮುಂದಿನ ಆದೇಶ ಕೋರಿ ಕಡತ ಮಂಡಿಸುವುದು.ಸಾದಿಲ್ವಾರ್ ಬಿಲ್ಲುಗಳನ್ನು ಸಿದ್ದಪಡಿಸುವುದು.ನಗದು ಪುಸ್ತಕ ನಿರ್ವಹಣೆ,ನೊಂದಣಿ,ರವಾನೆ,ಸ್ಟಾಂಪ್‌ವಹಿ ನಿರ್ವಹಣೆ,ವೇತನ ಬಿಲ್ಲು ತಯಾರಿಸಿ ಸಿದ್ದಪಡಿಸುವುದು ಹಾಗೂ ಆಡಳಿತಾತ್ಮಕ ಕೆಲಸಕ್ಕೆ ಸಂಬಂಧಿಸಿದ ಕೆಲಸ ನಿರ್ವಹಿಸುವುದು. |
| **ಸಹಾಯಕ ತೋಟಗಾರಿಕೆ ಅಧಿಕಾರಿ** | ತಾಲ್ಲೂಕಿನ ಘಟಕಾಧಿಕಾರಿಯಾಗಿ ಇಲಾಖೆಯ ಪ್ರಧಾನ ಕಾರ್ಯ ನಿರ್ವಾಹಕ ಅಧಿಕಾರಿಯಾಗಿದ್ದು, ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸಬೇಕಾಗಿದೆ. |
| **ಕೇಂದ್ರ ಸ್ಥಾನಿಕ ಸಹಾಯಕರು** | ತಾಂತ್ರಿಕ ಹಾಗೂ ಆರ್ಥಿಕ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ನಿಯಮಾವಳಿಗಳ ಪ್ರಕಾರ ದೈನಂದಿನ ಕೆಲಸ ಕಾರ್ಯಗಳಲ್ಲಿ ಸಹಕರಿಸುವುದು. |
| **ಸಹಾಯಕ ತೋಟಗಾರಿಕೆ ನಿರ್ದೇಶಕರು** | ತಾಲ್ಲೂಕಿನ ಬಟವಾಡೆ ಅಧಿಕಾರಿಯವರಿಗೆ ಪ್ರಗತಿ ಸಾಧಿಸಲು ಸಹಾಯಕ ಅಧಿಕಾರಿಯಾಗಿ ಕೆಲಸ ನಿರ್ವಹಿಸುವುದು. |

**4 B (V) ನೌಕರರು ಅವರವರ ಕರ್ತವ್ಯಗಳನ್ನು ನಿರ್ವಹಿಸಲಾದ/ ಉಪಯೋಗಿಸುವ/ ನಿಯಂತ್ರಣದಲ್ಲಿಟ್ಟುಕೊಂಡಿರುವ ನಿಯಮಗಳು/ ಸೂಚನೆಗಳು/ ಕೈಪಿಡಿಗಳು/ ದಾಖಲೆಗಳು ಮತ್ತು ನಿಬಂದನೆಗಳು.**

1. ಕನಾ೯ಟಕ ನಾಗರೀಕ ಸೇವಾ ನಿಯಮಗಳು
2. ಕನಾ೯ಟಕ ನಾಗರೀಕ ಸೇವಾ ನಿಯಮಗಳು (ಸಿ.ಸಿ.ಎ. ನಿಯಮಾವಳಿ)
3. ಕನಾ೯ಟಕ ಆಥಿ೯ಕ ಸಂಹಿತೆ
4. ಕಛೇರಿ ಕೈಪಿಡಿ
5. ವೃಂದ ಮತ್ತು ನೇಮಕಾತಿ ನಿಯಮಗಳು
6. ಆಯವ್ಯಯ ಕೈಪಿಡಿ
7. ಕನಾ೯ಟಕ ಖಜಾನೆ ಸಂಹಿತೆ
8. ಸಾದಿಲ್ವಾರು ವೆಚ್ಚದ ಕೈಪಿಡಿ
9. ಕನಾ೯ಟಕ ನಾಗರೀಕ ಸೇವಾ ನಡತೆ ನಿಯಮ
10. ಕರ್ನಾಟಕ ಪಾರದರ್ಶಕತೆ ಅಧಿನಿಯಮ-1999
11. ಕರ್ನಾಟಕ ಪಂಚಾಯತರಾಜ್ ಅಧಿನಿಯಮ-1993

12. ಮಾಹಿತಿ ಹಕ್ಕು ಅಧಿನಿಯಮ-2005

13. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯ ಮಾರ್ಗಸೂಚಿಗಳು

14. ಸೂಕ್ಷ್ಮ ನೀರಾವರಿ ಯೋಜನೆಯ ಮಾರ್ಗಸೂಚಿಗಳು

15. ರಾಷ್ಟ್ರೀಯ ಔಷಧಿ ಬೆಳೆಗಳ ಮಿಷನ್ ಯೋಜನೆಯ ಮಾರ್ಗಸೂಚಿಗಳು

16. ರಾಜ್ಯ ವಲಯ ಹಾಗೂ ಜಿಲ್ಲಾ ಪಂಚಾಯತ ಯೋಜನೆಗಳಿಗೆ ಸಂಬಂಧಿಸಿದ ಮಾರ್ಗಸೂಚಿಗಳು

17. ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಅಧಿನಿಯಮ

18. ಇಲಾಖೆ ಮತ್ತು ಆರ್ಥಿಕ ಇಲಾಖೆ ಹೊರಡಿಸಿದ ಡೆಲಿಗೇಷನ್ ಆಫ್ ಪಾವರ್ಸ್ ಮತ್ತು ವಿಶೇಷ ಡೆಲಿಗೇಷನ್ ಆಫ್ ಪಾವರ್ಸ್

19. ಸರಕಾರದ ಅಧಿಸೂಚನೆಗಳು (ಸುತ್ತೋಲೆಗಳು)

20. ಇಲಾಖೆಯಿಂದ ಹೊರಡಿಸಲಾದ ವಿಶೇಷ ಆದೇಶಗಳು ಮತ್ತು ಸುತ್ತೋಲೆಗಳು

**4 : (VI) ಕಡತ ಶೀರ್ಷಿಕೆ:**

| ಕ್ರ.ಸಂ. | ಕಡತದ ಶಾಖೆ | | ದಾಖಲಾತಿಗಳ ಉಲ್ಲೇಖ |
|---|---|---|---|
| 1. | ಸಿಬ್ಬಂಧಿ | EST | ತೋಟಗಾರಿಕೆ ಇಲಾಖೆಯ ಸಿಬ್ಬಂಧಿ ಮತ್ತು ಅಧಿಕಾರಿಗಳ ಶಿಸ್ತು, ನಡತೆ ಮತ್ತು ಇತರೆ ವಿಷಯಗಳು |
| 2. | ಲೆಕ್ಕ ಶಾಖೆ | Accounts | ಲೆಕ್ಕ ಪತ್ರ ಹಾಗೂ ಲೆಕ್ಕ ಪತ್ರಗಳ ಪರಿಶೀಲನೆ ನಗದು ವಹಿ ನಿರ್ವಹಣೆ ಇತ್ಯಾದಿ |
| 3. | ಲೆಕ್ಕ ತಪಾಸಣೆ | Audit | ಮಹಾಲೇಖ ಪಾಲಕರ, ನಿರ್ದೇಶನಾಲಯ ಹಾಗೂ ಜಿಲ್ಲಾ ಪಂಚಾಯತ ಕಛೇರಿಗಳ ಲೆಕ್ಕ ತಪಾಸಣೆ ಪರಿಶೀಲನೆ ಹಾಗೂ ಅನುಸರಣಾ ಉತ್ತರ ನಿರ್ವಹಣೆ |
| 4. | ತಾಂತ್ರಿಕ ಸಹಾಯಕರು | TA | ತಾಂತ್ರಿಕ ವಿಭಾಗದ ಎಲ್ಲಾ ಕೆಲಸಗಳ ನಿರ್ವಹಣೆ, ವಿಶೇಷ ಯೋಜನೆಗಳಿಗೆ ತಾಂತ್ರಿಕ ಕಡತಗಳ ನಿರ್ವಹಣೆ |

- ಸಾಮಾನ್ಯ ಸ್ವೀಕೃತಿ.
- ನಮೂನೆ ೧೫ಖಖ ರವಾನೆ ರಿಜಿಸ್ಟರ್.
- ನಮೂನೆ-ಎ ಮುದ್ದಾಮ ರಿಜಿಸ್ಟರ್.
- ನಿಯಮ ೨೭ (ನಿಯಮ ೬೩) ಸ್ಟಾಂಪ್ ರಿಜಿಸ್ಟರ್.
- ನಮೂನೆ-೬ (ನಿಯಮ ೩೮)ನಗದು ಪುಸ್ತಕ ರಿಜಿಸ್ಟರ್.
- ಕ.ಅ.ಸ.ಪ್ರ ಪತ್ರ 1 (ಅನುಚ್ಛೇದ-೬ಹಣ ಸ್ವೀಕರಿಸಿದ ಬಗ್ಗೆ ಸ್ವೀಕೃತಿ ಪತ್ರ)
- ಕ.ಖ.ಸಂ ೬೫-ಎ ಬಿಲ್ಲು ಹಾಜರುಪಡಿಸುವ ಚೀಟಿ ರಿಜಿಸ್ಟರ್.
- ಕ.ಆ.ಸಂ ನಮೂನೆ ೬೨-ಎ ಪರಿವರ್ತನೆಯ ಸಲುವಾಗಿ ಬಿಲ್‌ಗಳ ರಿಜಿಸ್ಟರ್.
- ನಮೂನೆ ಸಂಖ್ಯೆ-೨೪ಎ ವೇತನ ಬಟವಾಡೆ ಪುಸ್ತಕ (ನಮೂನೆ ಸಂಖ್ಯೆ ೨೪ಎ)
- ಆಕಸ್ಮಿಕ ರಜಾ ವಹಿ.

- ತೋ.ಉ.ನಿ ಕಛೇರಿ ಅಧಿಕಾರಿ/ ಸಿಬ್ಬಂದಿ ವರ್ಗದವರ ವೇತನ ಬಿಲ್ಲಿನಲ್ಲಿ ಕಡಿತಗೊಳ್ಳುವ ರಿಜಿಸ್ಟರ್ ಹಬ್ಬದ ಮುಂಗಡ ೨)
- ಸಾ.ಭ.ನಿ,ಕೆ.ಜಿ.ಆಯ್.ಡಿ, ಎಲ್.ಆಯ್.ಸಿ, ವೃತ್ತಿ ತೆರಿಗೆ, ಜಿ.ಆಯ್.
- ಲೇಖನ ಸಾಮಗ್ರಿ ವಿತರಣಾ ರಿಜಿಸ್ಟರ್.
- ದಿನವಹಿ ದಾಸ್ತಾನು ಪುಸ್ತಕ ರಿಜಿಸ್ಟರ್.
- ತೋ.ಉ.ನಿ (ಜಿಪಂ) ಶಿರಸಿ ಕಛೇರಿಯ ಮಂಜೂರಾತಿ ಆದೇಶ ಪುಸ್ತಕ.
- ಈ ಕಛೇರಿಯ ಸಾಧಿಲ್ವಾರು ಪುಸ್ತಕ.
- ತಾಲೂಕು ಮಟ್ಟದ ಕಛೇರಿಗಳಿಗೆ ಮಂಜೂರಾತಿ ನೀಡುವ ವಹಿ.
- ಡಿ.ಸಿ ಬಿಲ್ಲುಗಳನ್ನು ಮೇಲುಸಹಿ ಮಾಡುವ ವಹಿ.
- ಜಿಲ್ಲಾ ಪಂಚಾಯತ್ ಕಾರವಾರದಿಂದ ಬಂದ ಅನುದಾನವನ್ನು ತಾಲೂಕಾವಾರು ಬಿಡುಗಡೆ ಮಾಡುವ ವಹಿ.
- ತಾಲೂಕು ಪಂಚಾಯತ ಯೋಜನೆಯ ಮೆಲ್ ಸಹಿ ವಹಿ.
- ನಮೂನೆ ೨4 ನಿಯಮ–5೮ ಪ್ರಯಾಣ ಭತ್ಯೆ ರಿಜಿಸ್ಟರ್ (ನಮೂನೆ–೨4 (ನಿಯಮ–5೮).
- ಕ.ಅ.ಸಂ/74 ರಲ್ಲಿ ನಿಗಧಿಪಡಿಸಿರುವ ನಮೂನೆ ಸರ್ಕಾರದ ಮೋಟಾರುವಾಹನದ ಲಾಗ್ ಪುಸ್ತಕ.
- ಮಾಹೆವಾರು ಖರ್ಚಿನ ತಃಖ್ತೆಯ ರಿಜಿಸ್ಟರ್.
- ಅಧಿಕಾರಿ/ ಸಿಬ್ಬಂದಿಗಳ ಹಾಜರಾತಿ ಪಟ್ಟಿ ರಿಜಿಸ್ಟರ್.
- ಸಾಮಾನ್ಯ ಭವಿಷ್ಯ ನಿಧಿಯ ಮುಂಗಡ ಡ್ರಾ ಮಾಡುವ ರಿಜಿಸ್ಟರ್.
- ವಿದ್ಯುತ್ ಬಳಕೆ ವೆಚ್ಚದ ವಹಿ.
- ವಿಷಯ ವಹಿ ರಿಜಿಸ್ಟರ್.
- ಎನ್.ಡಿ.ಸಿ ಬಿಲ್ಲು ರಿಜಿಸ್ಟರ್.
- ನಮೂನೆ–14 ಅಂತಿಮ ವೇತನ ಪ್ರಮಾಣ ಪತ್ರ.
- ಸಾದಿಲ್ವಾರು ಬಿಲ್ಲುಗಳ ವಿವರ.
- ಜೆರಾಕ್ಸ ಯಂತ್ರದ ರಿಜಿಸ್ಟರ್.
- ಕಂಪ್ಯೂಟರ್ ರಿಜಿಸ್ಟರ್.
- ನಮೂನೆ34–ಎ ಪೀಠೋಪಕರಣ ವಹಿ.
- ಬಿ–7 ನಗದು ರಶೀದಿ.
- ಅಧಿಕಾರಿ/ ಸಿಬ್ಬಂದಿಯರ ಕಾರ್ಯನಿರ್ವಾಹಣ ವರದಿ ಫೈಲ್.
- ಸಿಬ್ಬಂದಿಗಳ ಸೇವಾ ಪುಸ್ತಕ ರಿಜಿಸ್ಟರಗಳು.
- 7–ಎ ದೂರವಾಣಿ ರಿಜಿಸ್ಟರ್.
- ಶುದ್ಧ ಪ್ರತಿ ವಹಿ.
- ಭಾರತ ಸರ್ಕಾರ ಮಾಹಿತಿ ಹಕ್ಕು ನಿಯಮ–2005.

- ಸರ್ಕಾರ ಸುತ್ತೋಲೆಗಳ ಫೈಲ್.
- ಲೆಕ್ಕ ತಪಾಸಣೆ ಫೈಲ್.
- ರಾಷ್ಟ್ರೀಯ ತೋಟಗಾರಿಕೆ ಮಿಷನ್ ನಗದು ಪುಸ್ತಕ ವಹಿ.
- ರಾಷ್ಟ್ರೀಯ ತೋಟಗಾರಿಕೆ ಮಿಷನ್ ಡಿ.ಸಿ ಬಿಲ್ಲುಗಳ ರಿಜಿಸ್ಟರ್.
- ರಾಷ್ಟ್ರೀಯ ತೋಟಗಾರಿಕೆ ಮಿಷನ್ ಚೆಕ್ ಗಳನ್ನು ವಿವರಿಸುವ ರಿಜಿಸ್ಟರ್.
- ರಾಷ್ಟ್ರೀಯ ಔಷಧಿ ಬೆಳೆಗಳ ಮಿಷನ್ ನಗದು ಪುಸ್ತಕ ವಹಿ.
- ರಾಷ್ಟ್ರೀಯ ಔಷಧಿ ಬೆಳೆಗಳ ಮಿಷನ್ ಡಿ.ಸಿ ಬಿಲ್ಲುಗಳ ರಿಜಿಸ್ಟರ್.
- ರಾಷ್ಟ್ರೀಯ ಔಷಧಿ ಬೆಳೆಗಳ ಮಿಷನ್ ಚೆಕ್ ಗಳನ್ನು ವಿವರಿಸುವ ರಿಜಿಸ್ಟರ್.
- ಸೂಕ್ಷ್ಮ ನೀರಾವರಿ ಯೋಜನೆಯ ನಗದು ಪುಸ್ತಕ ವಹಿ.
- ಸೂಕ್ಷ್ಮ ನೀರಾವರಿ ಯೋಜನೆಯ ಡಿ.ಸಿ ಬಿಲ್ಲುಗಳ ರಿಜಿಸ್ಟರ್.
- ಸೂಕ್ಷ್ಮ ನೀರಾವರಿ ಯೋಜನೆಯ ಚೆಕ್ ಗಳನ್ನು ವಿವರಿಸುವ ರಿಜಿಸ್ಟರ್.

**4 B (VII) ಪಾಲಸಿಗಳನ್ನು ಮಾಡುವಾಗ ಅಥವಾ ಅನುಷ್ಠಾನಗೊಳಿಸುವ ಸಂದರ್ಭದಲ್ಲಿ ಇರುವ ಏರ್ಪಾಡುಗಳನ್ನು ಸಾರ್ವಜನಿಕ ಸದಸ್ಯರುಗಳ ಸಹಭಾಗಿತ್ವ ಮುಂತಾದ ವಿವರಗಳು.**

ಇಲಾಖೆ ಮಾರ್ಗಸೂಚಿ/ ಎಂ.ಎಂ.ಆರ್. ಕಾರ್ಯಕ್ರಮಗಳು ಜಿಲ್ಲಾ ಪಂಚಾಯತ ಆದೇಶಗಳ ಅಡಿಯಲ್ಲಿ ಯೋಜನೆಗಳ ಅನುಷ್ಠಾನಗೊಳಿಸಲು ಕ್ರಮ ತೆಗೆದುಕೊಳ್ಳುವುದು. ಸಾರ್ವಜನಿಕ ಕುಂದುಕೊರತೆಗಳನ್ನು ಕಾನೂನಿನ ಚೌಕಟ್ಟಿನೊಳಗೆ ನಿರ್ಧರಿಸಿ ಕ್ರಮ ಕೈಗೊಳ್ಳುವುದು.

**4 B (VIII) ಈ ಇಲಾಖೆಯಿಂದ ರಚಿಸಲ್ಪಡುವ ಅಥವಾ ಸಲಹೆಗಳನ್ನು ಪಡೆಯುವ ಸಲುವಾಗಿ ಎರಡು ಅಥವಾ ಅದಕ್ಕಿಂತ ಹೆಚ್ಚಾಗಿರುವ ಸದಸ್ಯರ ಸಮಿತಿ ಅಥವಾ ಇತರ ಪಟ್ಟಿ ಹಾಗೂ ಇಂತಹ ಕಮಿಟಿ ಮತ್ತು ಸಮಿತಿಗಳು ನಡಿಸುವ ಸೇವೆ ಮತ್ತು ನಡವಳಿಗಳನ್ನು ಸಾರ್ವಜನಿಕರು ಆಕ್ಷೇಪಿಸಬಹುದೇ? ಅಥವಾ ಇಂತಹ ಸಭೆಗಳ ನಡವಳಿಗಳನ್ನು ವೀಕ್ಷಿಸಲು ಸಾರ್ವಜನಿಕರಿಗೆ ಮುಕ್ತ ಅವಕಾಶವಿದೆಯೇ?**

ರಾಷ್ಟ್ರೀಯ ತೊಟಗಾರಿಕೆ ಮಿಷನ್ ಯೋಜನೆಯಡಿ ಜಿಲ್ಲಾ ಸಮಿತಿ ಮತ್ತು ಜಿಲ್ಲಾ ತಾಂತ್ರಿಕ ಸಮಿತಿಯ ಮೂಲಕ ಜಿಲ್ಲೆಗೆ ಅವಶ್ಯವಿರುವ ಯೋಜನೆಗಳನ್ನು ಸಿದ್ದಪಡಿಸುವುದು. ಕಾರ್ಯಕ್ರಮಗಳ ಅನುಷ್ಟಾನಕ್ಕೆ ಬೇಕಾದ ಅವಶ್ಯಕ ನಿರ್ಣಯಗಳನ್ನು ತಗೆದುಕೊಳ್ಳುವುದು. ರಾಷ್ಟ್ರೀಯ ತೊಟಗಾರಿಕೆ ಮಿಷನ್ ಯೋಜನೆಯಡಿ ಜಿಲ್ಲಾ ಸಮಿತಿ ಮತ್ತು ಜಿಲ್ಲಾ ತಾಂತ್ರಿಕ ಸಮಿತಿಗಳ ಸದಸ್ಯರುಗಳು ಮತ್ತು ಅವುಗಳ ವ್ಯಾಪ್ತಿ ಈ ಕೆಳಕಂಡಂತ್ತಿರುತ್ತದೆ.

ಈ ಎಲ್ಲಾ ಸಮಿತಿಗಳ ನಡವಳಿಗಳನ್ನು ವೀಕ್ಷಿಸಲು ಸಾರ್ವಜನಿಕರಿಗೆ ಮುಕ್ತ ಅವಕಾಶ ಇರುತ್ತದೆ.

**4 B (IX) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಹಾಸನ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ದೂರವಾಣಿ ವಿವರಗಳ ಪಟ್ಟಿ.**

| ಕ್ರ.ಸಂ. | ಹುದ್ದೆ | ಹೆಸರು | ದೂರವಾಣಿ ಸಂಖ್ಯೆ |
|---|---|---|---|
| 1 | ತೋಟಗಾರಿಕೆ ಸಹಾಯಕರು | ಖಾಲಿ ಹುದ್ದೆ (2) | 08172-262390 |
| 2 | ಪ್ರಥಮ ದರ್ಜೆ ಸಹಾಯಕರು | ಮಂಜುನಾಥ ಜಿ.ಎಂ. | 08172-262390 |
| 3 | ಸಹಾಯಕ ತೋಟಗಾರಿಕೆ ಅಧಿಕಾರಿ | ಖಾಲಿ ಹುದ್ದೆ (3) | 08172-262390 |
| 4 | ಸಹಾಯಕ ತೋಟಗಾರಿಕೆ ಅಧಿಕಾರಿ | ಹೆಚ್.ಸಿ.ದಿವ್ಯಾ | 08172-262390 |
| 5 | ಸಹಾಯಕ ತೋಟಗಾರಿಕೆ ಅಧಿಕಾರಿ | ಜಿ.ಎನ್. ಪವಿತ್ರ | 08172-262390 |
| 6 | ಸಹಾಯಕ ತೋಟಗಾರಿಕೆ ಅಧಿಕಾರಿ | ವಿಷಕಂಠ | 08172-262390 |
| 7 | ಸಹಾಯಕ ತೋಟಗಾರಿಕೆ ನಿರ್ದೇಶಕರು | ಖಾಲಿ ಹುದ್ದೆ (1) | 08172-262390 |
| 8 | ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು | ಎಂ.ಎನ್. ಮಂಜುನಾಥ | 08172-262390 |

**4 B (X) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಹಾಸನ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ೨೦೧೧-೧೨ ವೇತನದ ವಿವರ.**

| ಕ್ರ.ಸಂ. | ಹುದ್ದೆ | ಹೆಸರು | ವೇತನ |
|---|---|---|---|
| 1 | ತೋಟಗಾರಿಕೆ ಸಹಾಯಕರು | ಖಾಲಿ ಹುದ್ದೆ (2) | – |
| 2 | ಪ್ರಥಮ ದರ್ಜೆ ಸಹಾಯಕರು | ಜಿ.ಎಂ. ಮಂಜುನಾಥ | 18755 |
| 3 | ಸಹಾಯಕ ತೋಟಗಾರಿಕೆ ಅಧಿಕಾರಿ | ಖಾಲಿ ಹುದ್ದೆ (3) | - |
| 4 | ಸಹಾಯಕ ತೋಟಗಾರಿಕೆ ಅಧಿಕಾರಿ | ಹೆಚ್.ಸಿ.ದಿವ್ಯಾ | 20183 |
| 5 | ಸಹಾಯಕ ತೋಟಗಾರಿಕೆ ಅಧಿಕಾರಿ | ಜಿ.ಎನ್.ಪವಿತ್ರ | 19309 |
| 6 | ಸಹಾಯಕ ತೋಟಗಾರಿಕೆ ಅಧಿಕಾರಿ | ವಿಷಕಂಠ | 19815 |
| 7 | ಸಹಾಯಕ ತೋಟಗಾರಿಕೆ ನಿರ್ದೇಶಕರು | ಖಾಲಿ ಹುದ್ದೆ (1) | - |
| 8 | ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು | ಎಂ.ಎನ್. ಮಂಜುನಾಥ | 44506 |

**4 B (XI) ಆಯವ್ಯಯ ವಿತರಣೆ 2011-12.**

| ಕ್ರ.ಸಂ. | ಯೋಜನೆ/ ಯೋಜನೇತರ | ಭೌತಿಕ ಗುರಿ | ಆರ್ಥಿಕ ಗುರಿ |
|---|---|---|---|
| 1 | ಹನಿ ನೀರಾವರಿ ಯೋಜನೆ 2401–00–108–2–30 | 50 | 25.00 |
| 2 | ಪ್ರಚಾರ ಮತ್ತು ಸಾಹಿತ್ಯ 2401–00–119–3–74 | 2020 ಸಂಖ್ಯೆ | 3.55 |
| 3 | ರೈತರಿಗಾಗಿ ತರಬೇತಿ 2401–00–119–3–75 | 90 | 0.18 |
| 4 | ಸಾಮಾಜಿಕ ತೋಟಗಾರಿಕೆ, ಸಸ್ಯ ಸಂರಕ್ಷಣೆ, ಸರ್ಕಾರಿ ಕಛೇರಿ/ಅತಿಥಿ ಗೃಹಗಳ ಮುಂದಿಡಲು ಅಲಂಕಾರಿಕ ಗಿಡಗಳ ಅಭಿವೃದ್ಧಿ 2401–00–119–3–76 | 5 | 0.72 |
| 5 | ತೋಟಗಾರಿಕೆ ಬೆಳೆಗಳು ರೋಗ ಮತ್ತು ಕೀಟಗಳ ಸಮಗ್ರ ನಿಯಂತ್ರಣ ಯೋಜನೆ 2401-00-119-5-02 | 87.50 | 0.875 |

| | | | |
|---|---|---|---|
| 6 | ಹೊಸ ತರಕಾರಿಗಳನ್ನು ಪರಿಚಯಿಸುವ ಯೋಜನೆ 2401–00–800–2–33 | 16252 | 432 |
| 8 | ವಿಶೇಷ ಘಟಕ ಯೋಜನೆ 2401–00–800–2–05 | 22 | 1.10 |
| 9 | ರಾಷ್ಟ್ರೀಯ ತೋಟಗಾರಿಕೆ ಮಿಷನ್2401–119–40–400031 (NHM) | 531.66 | 36.108 |
| 11 | ಯೋಜನೇತರ 2401–00–001–2–02 | – | 16.50 |

**4 : (XII) ಸಹಾಯಧನದೊಂದಿಗೆ ನಡೆಸುವ ಯೋಜನೆಗಳು ಅಂತಹ ಯೋಜನೆಗಳ ಫಲಾನುಭವಿಗಳ ವಿವರ ಮತ್ತು ಮಂಜೂರಾದ ಹಣ.**

ಫಲಾನುಭವಿಗಳ ಆಯ್ಕೆ ನಡೆಯುತ್ತಿದೆ,

**4 : (XIII) ಇಲಾಖೆಯಿಂದ ಅಥರೈಜೇಷನ್ ಮಂಜೂರಾದ ಅಥವಾ ಪರವಾನಿಗೆ ನೀಡಲಾದ ಮತ್ತು ಕಡಿಮೆ ದರದಲ್ಲಿ ಸವಲತ್ತುಗಳನ್ನು ಪಡೆಯಲಾದ ರೆಸಿಪಿಯೆಂಟ್ಸ್‌ಗಳ ವಿವರಗಳು.**

ಫಲಾನುಭವಿಗಳ ಆಯ್ಕೆ ಪ್ರಗತಿಯಲ್ಲಿದೆ.

**4 : (XIV) ಕುಗ್ಗಿಸಲಾದ ಎಲೆಕ್ಟ್ರಾನಿಕ್ ಮಾದರಿಯಲ್ಲಿ ಲಭ್ಯವಿರುವ ಮಾಹಿತಿ ವಿವರ ದೊರಕುವಂತೆ ಅಥವಾ ಮಾಹಿತಿ ಇಟ್ಟುಕೊಂಡಿರುವಿಕೆ.**

೧)೨೦೧೦–೧೧ ನೇ ಸಾಲಿನ ಮಾರ್ಚ್ ಮಾಹೆಯ ಪ್ರಗತಿ ವರದಿ,
೨)೨೦೧೦–೧೧ ನೇ ಸಾಲಿನ ಮಾರ್ಚ್ ಮಾಹೆಯ ಖರ್ಚಿನ ವರದಿ,
೩)೨೦೧೦–೧೧ ನೇ ಸಾಲಿನ ಕಂಪೋನೆಂಟ್‌ವಾರು ತಾಲ್ಲೂಕಿನ ಗುರಿ

**4 : (XV) ಮಾಹಿತಿ ಪಡೆಯಲು ಸಾವಜನಿಕರಿಗೆ ಲಭ್ಯವಿರುವ ಅವಕಾಶ ವಿಚಾರಗಳು ಗ್ರಂಥಾಲಯ ಅಥವಾ ಓದುವ ಕೊಠಡಿಗಳನ್ನು ಒಳಗೊಂಡು ಸಾವಜನಿಕ ಉಪಯೋಗಕ್ಕಾಗಿ ತೆರೆದಿದ್ದಾರೆ?**

ಈ ಸೌಲಭ್ಯವು ಇರುವುದಿಲ್ಲ.

## **4 : (XVI) ಸಾವ೯ಜನಿಕ ಮಾಹಿತಿ ಅಧಿಕಾರಿಯ ಹೆಸರು, ಪದನಾಮ ಮತ್ತು ಇತರೇ ವಿವರಗಳು**

### **ಸಾರ್ವಜನಿಕ ಮಾಹಿತಿ ಅಧಿಕಾರಿ**

**ಶ್ರೀ. ಎಂ.ಎನ್. ಮಂಜುನಾಥ್**

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು

ಜಿಲ್ಲಾ ಪಂಚಾಯತ್, ಹಾಸನ.

ದೂರವಾಣಿ ಸಂಖ್ಯೆ ೨೬೭೩೯೦

### **ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ**

**ಕು// ದಿವ್ಯಾ ಹೆಚ್.ಸಿ.**

ಸಹಾಯಕ ತೋಟಗಾರಿಕೆ ಅಧಿಕಾರಿ

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ

ಜಿಲ್ಲಾ ಪಂಚಾಯತ್, ಹಾಸನ.

ದೂರವಾಣಿ ಸಂಖ್ಯೆ ೨೬೭೩೯೦

### **ಮೇಲ್ಮನವಿ ಪ್ರಾಧಿಕಾರ**

ಸಿ.ನಾಗರಾಜ್

ತೋಟಗಾರಿಕೆ ಉಪನಿರ್ದೇಶಕರು

(ಜಿಲ್ಲಾ ಪಂಚಾಯತ್), ಹಾಸನ.

ದೂರವಾಣಿ ಸಂಖ್ಯೆ ೨೬೭೩೯೦